ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜ್‌ರವರ ಕೋರ್ಟಿನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 532.

ಮೃತಪಟ್ಟ ದನಗಹಳ್ಳಿ ನಂಜರಾಜೇ ಅರಸಿನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಕೃಷ್ಣೀಅರಸಿನವರು ಮೃತಪಟ್ಟ ಸದರೀ ನಂಜರಾಜೇಅರಸಿನವರಿಗೆ ದತ್ತು ಮಕ್ಕಳಾಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಕಿಲ್ಲೇ ಸ್ಥಳದ ಸದರೀ ಕೃಷ್ಣೀ ಅರಸಿನವರು ಸದರೀ ವಾಸಸ್ಥರಾಗಿ ಮೃತಪಟ್ಟ ನಂಜರಾಜೇ ಅರಸಿನವರ ಜಿಂದಗೀ ಬಗ್ಯಾಗಿ ಬರತಕ್ಕ 500 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡಿಕೊಳ್ಳುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಕೃಷ್ಣೀ ಅರಸಿನವರ ಅರ್ಜೀಯನ್ನು 1887ನೇ ಇಸವಿ ನವಂಬರ್ ತಿಂಗಳು ತಾರೀಖು 21ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನಂಜರಾಜೇ ಅರಸಿನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಯಿದರಿಂದ ತಿಳಿಯಪಡಿಸಿಯಿದೆ.

1887ನೇ ಇಸವಿ ಅಕ್ಟೋಬರ್ ತಿಂಗಳು 18ನೇ ತಾರೀಖಿನಲ್ಲಿ ಕೋರ್ಟು ಮೊಹರ್ ನಿಸೀ ನಮ್ಮ್ಕದಸ್ತಖತ್ತೊಡನೇ ಕೊಡೋಣಾಗಿದೆ.

1887ನೇ ಇಸವಿ ಅರ್ಜೀ ನಂಬರ್ 537.

ಮೃತಪಟ್ಟ ದೇವೀದಾಸ್‌ಲಾಲಾನ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಸುಬಕರ್ಣಲಾಲ್ ಮೃತಪಟ್ಟ ಸದರೀ ದೇವೀದಾಸ್‌ಲಾಲನಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ದೇವರಾಜ ಮೊಹಲಾ ಸ್ಥಳದ ಸದರೀ ಸುಬಕರ್ಣಲಾಲರು ಸದರೀ ವಾಸಸ್ಥರಾಗಿ ಮೃತಪಟ್ಟ ದೇವೀದಾಸ್‌ಲಾಲಾರ ಜಿಂದಗೀ ಬಗ್ಯಾಗಿ ಬರತಕ್ಕ 900 ರೂಪಾಯಿ ಸಾಲಗಳನ್ನು ವಸೂಲ್ ಮಾಡಿಕೊಳ್ಳುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಸುಬಕರ್ಣಲಾಲರ ಅರ್ಜೀಯನ್ನು 1887ನೇ ಇಸವಿ ನವಂಬರ್ ತಿಂಗಳು ತಾರೀಖು 21ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದೇವೀದಾಸ್‌ಲಾಲಾರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರು ಇರಬೇಕೆಂದು ಇದರಿಂದ ತಿಳಿಯಪಡಿಸಿದೆ.

1887ನೇ ಇಸವಿ ಅಕ್ಟೋಬರು ತಿಂಗಳು 19ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸೀ ನಮ್ಮ್ಕದಸ್ತಖತ್ತೊಡನೆ ಕೊಡೋಣಾಗಿದೆ.

1887ನೇ ಇಸವಿ ಅರ್ಜೀ ನಂಬರ್ 539.

ಮೃತಪಟ್ಟ ರಾಮಯ್ಯನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರಳು ತಿಮ್ಮಮ್ಮನವರು, ಮೃತಪಟ್ಟ ಸದರೀ ರಾಮಯ್ಯನವರಿಗೆ ತಾಯಿ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರ್ ಮಂಡಿಮೊಹಲಾ ಸ್ಥಳದ ಸದರೀ ತಿಮ್ಮಮ್ಮನವರು ಸದರೀ ವಾಸಸ್ಥರಾಗಿ ಮೃತಪಟ್ಟ ರಾಮಯ್ಯನವರ ಜಿಂದಗೀ ಬಗ್ಯಾಗಿ ಬರತಕ್ಕ 150 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ತಿಮ್ಮಮ್ಮನವರ ಅರ್ಜೀಯನ್ನು 1887ನೇ ಇಸವಿ ನವಂಬರ್ ತಿಂಗಳು ತಾರೀಖು 30ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ರಾಮಯ್ಯನವರ ಆಸ್ತಿಗೆ ಹಕ್ಕುದಾರರಾದವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅಕ್ಟೋಬರ್ 26ನೇ ತಾರೀಖಿನಲ್ಲಿ ಕೋರ್ಟು ಮೊಹರ್ ನಮ್ಮ್ಕ ದಸ್ತಖತ್ತೊಡನೇ ಕೊಡೋಣಾಗಿದೆ.

ಯಸ್. ಹೇಮಾಜಿರಾವ್,
ಡಿಸ್ಟ್ರಿಕ್ಟ್ ಜಡ್ಜ್.